ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಂಖ್ಯೆ : ಸಿ5(2)ಪವ್ಯ.ಬ.19/2020-21** **ದಿನಾಂಕ:12-01-2021**

**ಜ್ಞಾಪನಾ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು /ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4.:- ಈ ಕಛೇರಿಯ ಅಧಿಸೂಚನೆ ಪತ್ರದ ಸಮ ಸಂಖ್ಯೆ: ದಿನಾಂಕ:02-01-2021

5:- ದಿನಾಂಕ:12-01-2021 ರಂದು ನಡೆದ ಕೌನ್ಸಿಲಿಂಗ್.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಭೋದಕೇತರ) ವೃಂದದಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ, ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರು (ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಭೋದಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ :02-01-2021 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಬಿ" ವೃಂದದ ವೇತನ ಶ್ರೇಣಿ ರೂ. 40900-78200 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಇವರುಗಳಿಗೆ ಪತ್ರಾಂಕಿತ ಸಹಾಯಕ ಹುದ್ದೆಗಳಿಗೆ ವೇತನ ಶ್ರೇಣಿ ರೂ. 43100-83900 ರಂತೆ ಉಲ್ಲೇಖ [4] ರಲ್ಲಿ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ.

ಉಲ್ಲೇಖ [4] ರ ಬಡ್ತಿ ಆದೇಶದಲ್ಲಿ ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಅಧಿಕಾರಿಗಳು ಅಂಥ ಬಡ್ತಿಯನ್ನು ಹೊಂದಲು ಇಚ್ಚಿಸದಿದ್ದರೆ, ಆದೇಶ ದಿನಾಂಕದಿಂದ 07 ದಿನಗಳ ಒಳಗೆ ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವಂತೆ ಸೂಚಿಸಲಾಗಿತ್ತು.

ದಿನಾಂಕ: 02-01-2021 ರ ಅಧಿಸೂಚನೆಯಲ್ಲಿ ನೀಡಿರುವ 07 ಮಂದಿ ಅಧಿಕಾರಿಗಳಲ್ಲಿ ಓರ್ವ ಅಧಿಕಾರಿಯು ಬಡ್ತಿ ಮುಂದೂಡಲು ಮನವಿಯನ್ನು ಸಲ್ಲಿಸಿರುತ್ತಾರೆ. ಇವರ ಮನವಿಯನ್ನು ಪರಿಶೀಲಿಸಿ, ಪತ್ರಾಂಕಿತ ಸಹಾಯಕರು [ಬೋಧಕೇತರ] ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ಹೊಂದಲು ತಾತ್ಕಾಲಿಕವಾಗಿ

ನಿರಾಕರಿಸಿರುವುದನ್ನು ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 57 ಎಸ್.ಆರ್.ಆರ್.2001 ದಿನಾಂಕ: 22-05-2002 ಮತ್ತು ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರನ್ವಯ ಅಂಗೀಕರಿಸಿ ಅನುಮತಿಸಿದೆ ಮತ್ತು ಪ್ರತ್ಯೇಕ ಆದೇಶ ಹೊರಡಿಸಲಾಗಿದೆ.

ಬಡ್ತಿ ಹೊಂದಿದ ಅಧಿಕಾರಿಗಳಿಗೆ ದಿನಾಂಕ: 12-01-2021 ರಂದು ಸ್ಥಳ ಆಯ್ಕೆಗಾಗಿ ಕೌನ್ಸಿಲಿಂಗ್ ನಡೆಸಲಾಗಿದೆ. ಅದರಂತೆ, ಬಡ್ತಿ ಹೊಂದಿದ ಅಧಿಕಾರಿಗಳು ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳವನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಈ ಅಧಿಕಾರಿಗಳು ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ, ಸ್ಥಳ ನಿಯುಕ್ತಿಗೊಳಿಸಿ ಆದೇಶವನ್ನು ಹೊರಡಿಸಿದೆ. ಬಡ್ತಿ ಹೊಂದಿದ ಅಧಿಕಾರಿಗಳು ಆಯ್ಕೆ ಮಾಡಿಕೊಂಡ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಪತ್ರಾಂಕಿತ ಸಹಾಯಕರು ಈ ಆದೇಶ ಜಾರಿಯಾದ 07 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿಗಳಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ. ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಬಡ್ತಿ ಹೊಂದಿದ ಅಧಿಕಾರಿಗಳ ಹೆಸರು ಮತ್ತು ಕಛೇರಿ ವಿಳಾಸ ಶ್ರೀ / ಶ್ರೀಮತಿ | ಬಡ್ತಿ ಪಡೆದ ಪದನಾಮ/ಕಛೇರಿ ಹೆಸರು/ ಮತ್ತು ವಿಳಾಸ |
|---|---|---|---|
| 01 | 195 | **ಶ್ರೀ ಸೈಯದ್ ವಜೀರ್ ಅಹಮದ್,** ಪತ್ರಾಂಕಿತ ವ್ಯವಸ್ಥಾಪಕರು, ಪ್ರಸ್ತುತ ನಿಯೋಜನೆ ಮೇರೆಗೆ ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ, 12 ನೇ ಮಹಡಿ ವಿವಿ ಗೋಪುರ ಡಾ॥ ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ. |
| 02 | 198 | **ಶ್ರೀ.ಅರಿಫ್ ಉಲ್ಲಾ ಖಾನ್.** ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉತ್ತರ ವಲಯ-1, ರಾಜಾಜಿನಗರ, ಬೆಂಗಳೂರು. | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು ಜಿಲ್ಲೆ. |
| 03 | 202 | **ಬಿ.ಎಸ್. ಶಾಂತರಾಜು,** ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ. | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ. |
| 04 | 203 | **ಟಿ.ಎಂ.ಬಸವರಾಜು,** ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ. |

| | | | |
|---|---|---|---|
| 05 | 204 | **ಶ್ರೀಮತಿ ಹೆಚ್.ಎಸ್.ಉಷಾದೇವಿ,** ಸಹಾಯಕ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ. |
| 06 | 274 | ಹೆಚ್.ಎಸ್.ಹುತ್ತೇಶ್, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. | **ಪತ್ರಾಂಕಿತ ಸಹಾಯಕರು,** ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ. |

ಷರತ್ತುಗಳು

*01.* ಮೇಲ್ಕಂಡ ಪತ್ರಾಂಕಿತ ಸಹಾಯಕ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಪತ್ರಾಂಕಿತ ಸಹಾಯಕ ಹುದ್ದೆಯಲ್ಲಿ ಕ.ನಾ.ಸೇ.ನಿಯಮ 42[ಬಿ] ಅನ್ವಯ ವೇತನ ನಿಗಧಿಗೆ ಅರ್ಹರಿರುತ್ತಾರೆ.

*02.* ಈ ಅಧಿಕಾರಿಗಳ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಅಲ್ಲದೆ ಸರ್ಕಾರಿ ನೌಕರನ ವಿರುದ್ಧ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ಪ್ರಾರಂಭವಾಗಿ ಅಂತಹ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ದಂಡನೆಯಲ್ಲಿ ಪರ್ಯಾವಸಾನಗೊಂಡಿದ್ದಲ್ಲಿ, ಆ ದಂಡನೆಯು ಜಾರಿಯಲ್ಲಿರುವ ಅವಧಿಯಲ್ಲಿ ಅಂತಹ ಸರ್ಕಾರಿ ನೌಕರರಿಗೆ ಮುಂಬಡ್ತಿ ಹೊಂದಲು ಆಸ್ಪದವಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ. ಅಧೀಕ್ಷಕರ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ, ಇದನ್ನು ಖಚಿತಪಡಿಸಿಕೊಳ್ಳುವುದು.

*03.* ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ವತ: ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ, ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.

*04.* ಈ ಆದೇಶ ಹೊರಡಿಸಿದ 7 ದಿನದೊಳಗೆ ಕರ್ತವ್ಯದಿಂದ ಬಿಡುಗಡೆ ಹೊಂದಿ/ ಸೇರ್ಪಡೆಗೊಳ್ಳುವುದು.

*05.* ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ನೌಕರರನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

*06.* ನೌಕರರು ಸ್ಥಳನಿಯುಕ್ತಿಯನ್ನು ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಪಡೆದಿರುವುದರಿಂದ ಯಾವುದೇ ಪ್ರಯಾಣ ಭತ್ಯೆ, ವರ್ಗಾವಣೆ ಭತ್ಯೆ ಅಥವಾ ಸೇರಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

*07.* ಈ ಎಲ್ಲಾ ಅಂಶಗಳನ್ನು ಕಛೇರಿ ಮುಖ್ಯಸ್ಥರು ಪರಿಶೀಲಿಸಿ ಸ್ಥಾನಾಪನ್ನ ಬಡ್ತಿ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದಿಸಲು ಕ್ರಮ ವಹಿಸಿ ಈ ಕಛೇರಿಗೆ ವರದಿ ಮಾಡತಕ್ಕದ್ದು.

*08.* ಅಧಿಕಾರಿಗಳು ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೆ ಈ ಕಛೇರಿಗೆ ವರದಿ ಸಲ್ಲಿಸುವುದು.

*09.* ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ಅಧಿಕಾರಿಗಳನ್ನು ಸ್ಥಾನಾಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

**[ಸಿರಿಯಣ್ಣವರ ಲಲಿತ ಚಂದ್ರಶೇಖರ್]**
**ನಿರ್ದೇಶಕರು [ಆಡಳಿತ] [ಹೆ.ಪ್ರ]**

**ಇವರಿಗೆ:-**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.

3) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು ಇವರ ಮಾಹಿತಿಗಾಗಿ,
4) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
5) ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
6) ರಾಜ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
7) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
8) ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
9) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
10) ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
11) ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
12) ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
13) ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರ ಕಛೇರಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಡಿ.ಸುಬ್ಬಯ್ಯ ರಸ್ತೆ, ಮೈಸೂರು-24
14) ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
15) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
16) ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
17) ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
18) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
19) ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
20) ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
22) ಕಛೇರಿ ಪ್ರತಿ.

12/1/19